# ಕರ್ನಾಟಕ ವಿಧಾನ ಪರಿಷತ್ತು

1. **ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ** : **880**
2. **ಸದಸ್ಯರ ಹೆಸರು** : **ಶ್ರೀ ಕೆ. ಅಬ್ದುಲ್ ಜಬ್ಬರ್** (ವಿಧಾನಸಭೆಯಿಂದ ಚುನಾಯಿತರಾದವರು)
3. **ಉತ್ತರಿಸಬೇಕಾದ ದಿನಾಂಕ** : **14.07.2023**
4. **ಉತ್ತರಿಸುವವರು** : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

| **ಕ್ರಮ ಸಂಖ್ಯೆ** | **ಪ್ರಶ್ನೆ** | **ಉತ್ತರ** |
|---|---|---|
| **ಅ)** | ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನೇರ ನೇಮಕಾತಿ ಮೂಲಕ ನೇಮಕಾತಿ ಮಾಡಿಕೊಳ್ಳಬಹುದಾದ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ (ಗೆಜೆಟೆಡ್-ಪ್ರೊಬೆಷನರಿ) ಸಂಖ್ಯೆ ಎಷ್ಟು; | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಬಹುದಾದ ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿ (ಗೆಜೆಟೆಡ್ ಪ್ರೊಬೆಷನರಿ) ಅಧಿಕಾರಿಗಳ ಸಂಖ್ಯೆ:**110.** ಅವುಗಳ ಪೈಕಿ ಪ್ರಸ್ತುತ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಬಹುದಾದ ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿ ಖಾಲಿ ಹುದ್ದೆಗಳ ಸಂಖ್ಯೆ:**59** |
| **ಆ)** | ಕಳೆದ ನಾಲ್ಕು ವರ್ಷಗಳಿಂದ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ನೇಮಕವಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಹುದ್ದೆಗಳ ನೇಮಕಾತಿಗಾಗಿ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ನೇಮಕ ಮಾಡಿಕೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ; (ವಿವರ ನೀಡುವುದು) | ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ 2011ನೇ ಬ್ಯಾಚಿನಲ್ಲಿ ಆಯ್ಕೆಯಾಗಿದ್ದ ಒಟ್ಟು **60** ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿಗಳ ಪೈಕಿ ದಾಖಲೆಗಳ ಪರಿಶೀಲನೆಗೆ ಹಾಜರಾದ ಒಟ್ಟು **41** ಅಧಿಕಾರಿಗಳಿಗೆ ನೇಮಕಾತಿ ಆದೇಶ ನೀಡಿದ್ದು, ಪ್ರಸ್ತುತ ಸದರಿ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. |

| | | |
|---|---|---|
| | | ಮುಂದುವರೆದು, ನೇರ ನೇಮಕಾತಿ ಕೋಟಾದಡಿಯಲ್ಲಿ ಪ್ರಸ್ತುತ ಖಾಲಿ ಇರುವ **59** ಕಾರ್ಯನಿರ್ವಾಹಕ ಅಧಿಕಾರಿ/ಸಹಾಯಕ ಕಾರ್ಯದರ್ಶಿ ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. |
| **ಇ)** | ಪ್ರಸ್ತುತ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕರುಗಳ ಸಂಖ್ಯೆ ಎಷ್ಟು; (ಪಟ್ಟಿ ನೀಡುವುದು) | ಪ್ರಸ್ತುತ ರಾಜ್ಯದಲ್ಲಿ ಒಟ್ಟು **168** ಕಾರ್ಯನಿರ್ವಾಹಕ ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. (ಪಟ್ಟಿಯನ್ನು ಅನುಬಂಧದಲ್ಲಿ ಲಗತ್ತಿಸಿದೆ) |
| **ಈ)** | ಕಳೆದ **04** ವರ್ಷಗಳಲ್ಲಿ ಎಷ್ಟು ಜನ ಅಧಿಕಾರಿಗಳು ಸದರಿ ಹುದ್ದೆಗೆ ಬಡ್ತಿ ಪಡೆದಿದ್ದಾರೆ? ವಿವರ ನೀಡುವುದು) | ಕಳೆದ **04** ವರ್ಷಗಳಲ್ಲಿ ಒಟ್ಟು **140** ಸಹಾಯಕ ನಿರ್ದೇಶಕರು ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿ ಹುದ್ದೆಗೆ ಮುಂಬಡ್ತಿ ಪಡೆದಿರುತ್ತಾರೆ. |

ಸಂಖ್ಯೆ: ಗ್ರಾಅಪ 159 ಪಬವ 2023 (ಇ)

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು